ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಸರ್ಕಾರಿ ಶಾಲೆಯಲ್ಲಿ ಇಂಗ್ಲೀಷ್ ಮಾಧ್ಯಮ ತರಗತಿಯ ಕುರಿತು

ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು ) :-

97 (137) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಶಾಲೆಯಲ್ಲಿ ಇಂಗ್ಲೀಷ್ ಮಾಧ್ಯಮ ತರಗತಿಯನ್ನು ಪ್ರಾರಂಭಿಸಲಾಗಿದೆಯೇ ; ಹಾಗಿದ್ದಲ್ಲಿ, ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಇಂಗ್ಲೀಷ್ ಮಾಧ್ಯಮವನ್ನು ಪ್ರಾರಂಭಿಸಲಾಗಿದೆಯೇ;

(ಆ) ಇಂಗ್ಲೀಷ್ ಮಾಧ್ಯಮ ಶಾಲೆಯನ್ನು ತೆರೆಯಲು ನುರಿತ ಶಿಕ್ಷಕರನ್ನು ನೇಮಕ ಮಾಡಲಾಗಿದೆಯೇ ; (ಜಿಲ್ಲಾವಾರು ಶಿಕ್ಷಕರ ಆಯ್ಕೆಯ ವಿವರ ನೀಡುವುದು)

(ಇ) ಎಲ್ಲಾ ವಿಷಯಕ್ಕೆ ಪ್ರತ್ಯೇಕವಾಗಿ ಶಿಕ್ಷಕರನ್ನು ನೇಮಕ ಮಾಡಲಾಗಿದೆಯೇ; ಮಾಡಿದ್ದಲ್ಲಿ ವಿವರ ನೀಡುವುದು ;

(ಈ) ಇಂಗ್ಲೀಷ್ ಮಾಧ್ಯಮವನ್ನು ಯಾವ ರೀತಿಯಲ್ಲಿ ಕಲಿಸಲಾಗುವುದು ಎಂಬುವುದರ ಕುರಿತು ಭಿತ್ತಿ ಚಿತ್ರಗಳ ಮುಖಾಂತರ ಜಾಹೀರಾತು ನೀಡಲಾಗಿದೆಯೇ ?